**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಅಪರ ಜೆಎಂಎಫ್‌ಸಿ ನ್ಯಾಯಾಲಯ, ಕೆ.ಜಿ.ಎಫ್,**

**ಸಿ.ಸಿ. ಸಂಖ್ಯೆಃ 1911/22**

ಸಿ.ಡಬ್ಲೂ: 5 /ಪಿ.ಡಬ್ಲೂಃ 5

ಪ್ರಮಾಣೀಕರಿಸಿದ ದಿನಾಂಕಃ 18/10/2023

| | |
|---|---|
| ಹೆಸರು | ಮಾರಪ್ಪ |
| ತಂದೆಯ ಹೆಸರು | ನಾರಾಯಣಪ್ಪ |
| ವಯಸ್ಸು | 45 ವರ್ಷ |
| ವೃತ್ತಿ | ಚಾಲಕ |
| ಸ್ಥಳ | ಅಲಿಕಲ್ಲು, ಕೆ ಜಿ ಎಫ್ |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದಃ-**

ಆರೋಪಿ ಪರಿಚಯವಿದೆ. ಚಾಸ-1 ರಿಂದ 4 ಹಾಗೂ 6 ರವರ ಪರಿಚಯವಿದೆ. ನಾನು ಯಾವುದೇ ಗಲಾಟೆ ನೋಡಿರುವುದಿಲ್ಲ. ಈ ಕುರಿತು ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಕೋರಿದ್ದು, ಅವರ ಮನವಿಯನ್ನು ಪರಿಗಣಿಸಿ ಸಾಕ್ಷಿಯ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ- ಮಾನ್ಯ ಸ.ಸ.ಅ ರವರಿಂದಃ-**

ದಿಃ 12.7.22 ರಂದು ಮದ್ಯಾಹ್ನ 2.30 ಗಂಟೆ ಸಮಯದಲ್ಲಿ ಅಲಿಕಲ್ಲು ಗ್ರಾಮದ ಸರ್ಕಾರಿ ಶಾಲೆ ಬಳಿ ಆರೋಪಿಯು ಚಾಸ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಕೋಲಿನಿಂದ ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ಚಾಸ-2 ರವರು ಸದರಿ ಗಲಾಟೆ ಬಿಡಿಸಲು ಬಂದಾಗ ಅವರಿಗೂ ಕೂಡ ಹೊಡೆದರು ಎಂದರೆ ಸರಿಯಲ್ಲ. ಸದರಿ ಗಲಾಟೆಯನ್ನು ನಾನು ಹಾಗೂ ಚಾಸ-6 ರವರು ಸೇರಿ ಬಿಡಿಸಿದೆವು ಎಂದರೆ ಸರಿಯಲ್ಲ. ಈ ಕುರಿತಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಸಅ ರವರ ಕೋರಿಕೆಯ ಮೇರೆಗೆ ಸಾಕ್ಷಿಯ ಹೇಳಿಕೆ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-3 ರಂತೆ ಹೇಳಿಕೆ ನೀಡಿದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ-ಆರೋಪಿ ವಕೀಲರಿಂದಃ-**

ಏನೂ ಇಲ್ಲ ಎಂದು ನುಡಿದಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತಗೊಳಿಸಲಾಗಿದೆ).

ಓದಿ ಹೇಳಿ ಕೇಳಿ ಸರಿ ಇದೆ

(ಮಂಜುನಾಥ. ಆರ್)

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಅಪರ ಜೆ.ಎಂ.ಎಫ್.ಸಿ, ಕೆಜಿಎಫ್.